ಜಲಪಾತಗಳ ಅಭಿವೃದ್ಧಿ

1343(1318); ಶ್ರೀ ಅರಬೈಲ್ ಶಿವರಾಮ್ ಹೆಬ್ಬಾರ್ (ಯಲ್ಲಾಪುರ)

ಅ) ಉತ್ತರ ಕನ್ನಡ ಜಿಲ್ಲೆ, ಯಲ್ಲಾಪುರ ಮತಕ್ಷೇತ್ರದಲ್ಲಿರುವ ರಮಣೀಯ ಜಲಪಾತಗಳಾದ ಸಾತೊಡ್ಡಿ ಜಲಪಾತ, ಮಾಗೋಡು ಜಲಪಾತ, ಜೇನುಕಲ್ಲು ಗುಡ್ಡ, ಶಿರ್ಲೆ ಜಲಪಾತ ಇವುಗಳ ಅಭಿವೃದ್ಧಿಗಾಗಿ ಸರ್ಕಾರದ ವತಿಯಿಂದ ಹಣ ಮೀಸಲಿಡಲಾಗಿದೆಯೇ;

ಆ) ಹಾಗಿದ್ದಲ್ಲಿ, ಇವುಗಳ ಅಭಿವೃದ್ಧಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು (ವಿವರ ನೀಡುವುದು)?

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯ, ಸಚಿವರು)

ಅ) ಇಲ್ಲ

ಆ) ಮಾಗೋಡು ಜಲಪಾತ ಪ್ರದೇಶದಲ್ಲಿ ಪ್ರವಾಸಿ ಸೌಲಭ್ಯಗಳನ್ನು ₹ 25.00 ಲಕ್ಷಗಳ ಅಂದಾಜಿನಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು, ಯಲ್ಲಾಪುರರವರ ಮೂಲಕ ಅಭಿವೃದ್ಧಿಪಡಿಸಲಾಗಿದೆ ಹಾಗೂ ನಬಾರ್ಡ್–ಆರ್.ಐ.ಡಿ.ಎಫ್–19 ರ ಅಡಿ, ಯಲ್ಲಾಪುರ ತಾಲ್ಲೂಕಿನ ಸಾತೊಡ್ಡಿ ಜಲಪಾತಕ್ಕೆ ಕಾಂಕ್ರೀಟ್ ಕಾಲುದಾರಿ ನಿರ್ಮಾಣ ಹಾಗೂ ರೈಲಿಂಗ್ಸ್ ಅಳವಡಿಕೆ ಕಾಮಗಾರಿಗಳನ್ನು ₹ 100.00 ಲಕ್ಷಗಳ ಅಂದಾಜಿನಲ್ಲಿ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಶಿರಸಿರವರ ಮೂಲಕ ಕೈಗೊಳ್ಳಲಾಗಿದೆ.